ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು-560065
* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 19-03.2021

# ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

## ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)
## (ದಿನಾಂಕ 20-03-2021 ರಿಂದ 24-03-2021 ವರೆಗೆ)

| ನಿಯತಾಂಕಗಳು | 20.03.2021 | 21.03.2021 | 22.03.2021 | 23.03.2021 | 24.03.2021 |
|---|---|---|---|---|---|
| ಮಳೆ (ಮಿ ಮಿ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 33 | 33 | 33 | 33 | 33 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 16 | 16 | 15 | 15 | 16 |
| ಮೋಡ ( ಪ್ರಮಾಣ) | 2 | 1 | 1 | 2 | 3 |
| ಅರ್ದ್ರತೆ 7.20 ಬೆ (ಶೇ) | 90 | 90 | 91 | 91 | 90 |
| ಅರ್ದ್ರತೆ 2.20 ಮ (ಶೇ) | 62 | 62 | 61 | 62 | 63 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 5 | 4 | 5 | 5 | 5 |
| ಗಾಳಿಯ ದಿಕ್ಕು ( ಡಿಗ್ರಿ) | 79 | 79 | 112 | 124 | 135 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆ ಕಡಿಮೆ. ದಿನದ ಗರಿಷ್ಠ ಉಷ್ಣಾಂಶ 33.0$^o$ C ಮತ್ತು ಕನಿಷ್ಠ 15.0–16.0$^o$ C ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **90-91** **%** ಇದ್ದು ಮಧ್ಯಾಹ್ನ **61-63** **%** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **4–5** ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಹವಾಮಾನ ಆಧಾರಿತ ಕೃಷಿ ಸಲಹೆಗಳು |
|---|---|
| ಸಾಮಾನ್ಯ | ➢ ದ್ವಿದಳದಾನ್ಯಗಳನ್ನು ಸಂಸ್ಕರಣಾ ಕೀಟಗಳಿಂದ ರಕ್ಷಿಸಲು ಎಣ್ಣೆಯ ಲೇಪನಮಾಡಿ ಸಂಗ್ರಹಿಸಬೇಕು (ಔಡಲ, ಅಗಸಿ, ಹೊಂಗೆ ಅಥವಾ ಬೇವಿನ ಎಣ್ಣೆ) ಪ್ರತಿ ಕಿ.ಗ್ರಾಂ ಬೀಜಕ್ಕೆ 3 ರಿಂದ 5 ಮಿ.ಲೀ. ಎಣ್ಣೆಯನ್ನು ಉಪಯೋಗಿಸಬೇಕು.<br>➢ ಕಟಾವು ಮಾಡಿದ ಬಿತ್ತನೆ ಬೀಜಗಳನ್ನು ಸರಿಯಾಗಿ ಒಣಗಿಸಬೇಕು. ಅಂದರೆ ಏಕದಳ ದಾನ್ಯಗಳು ತೇವಾಂಶ ಶೇ. 11 ರಿಂದ 12, ದ್ವಿದಳದಾನ್ಯಗಳ ತೇವಾಂಶ ಶೇ.9, ಎಣ್ಣೆಕಾಳುಗಳು ಶೇ.8 ಮತ್ತು ತರಕಾರಿ ಬೀಜಗಳು ಶೇ.5 ರಿಂದ 6 ರಷ್ಟಿರಬೇಕು.ಇದರಿಂದ ಹೆಚ್ಚುದಿನ ಕೆಡದಂತೆ ಬೀಜಗಳನ್ನು ಸಂಸ್ಕರಣೆ ಮಾಡಬಹುದು ಜೊತೆಗೆ ಉಗ್ರಾಣ ಕೀಟದ ಬಾಧೆಯನ್ನು ಕಡಿಮೆಮಾಡಬಹುದು. |
| ತೊಗರಿ | ➢ ಬೆಳೆ ಕಟಾವು ಮಾಡಿ ಅಲ್ಲಿನ ಕಡ್ಡಿಗಳನ್ನು ರಾಶಿ ಮಾಡಿ ಸ್ವಚ್ಚಮಾಡಿದ ನಂತರ ಆ ಭೂಮಿಯನ್ನು ಮಾಗಿ ಉಳುಮೆಯನ್ನು ಮಾಡಬೇಕು. ಇದರಿಂದಾಗಿ, ಭೂಮಿಯಲ್ಲಿಯ ಕೋಶ ವ್ಯವಸ್ಥೆಯಲ್ಲಿರುವ ಬಹಳಷ್ಟು ಕೀಟ ಪೀಡೆಗಳನ್ನು ನಿರ್ಮೂಲ ಮಾಡಬಹುದು. |
| ಮಾವು | ➢ ಮಾವು ಬೆಳೆಯಲ್ಲಿ ಕಾಯಿ ಉದುರುವುದು ಕಂಡು ಬಂದಿದೆ. ಮಾವಿನ ಬೆಳೆ ಕಾಯಿಕಟ್ಟುವ (ಗೊಟ್ಟೆ ಹಂತ) ಹಂತದಲ್ಲಿ ಇದ್ದು, ರೈತರು ತಪ್ಪದೆ ನೀರಿನ ನೀರುಣಿಸಬೇಕು.<br>➢ ನೀರಿನ ಅನುಕುಲತೆಗಳು ಹೆಚ್ಚಿಗೆ ಇದ್ದ ರೈತರು ಕಾಯಿಕಟ್ಟುವ ಹಂತದಿಂದ ಮಾಗುವ ಹಂತದವರೆಗೆ ಪ್ರತಿ 15–20 ದಿನಗಳಿಗೊಮ್ಮೆ ನೀರುಣಿಸಬೇಕು.<br>➢ ಮಾವಿನಲ್ಲಿ ಕಾಯಿಗಳು ಉದುರುವುದನ್ನು ತಡೆಗಟ್ಟಲು ಗೊಟ್ಟೆ ಹಂತದಲ್ಲಿ ನ್ಯಾಪ್ತಲಿನ್ ಅಸಿಟಿಕ್ ಆಸಿಡ್ 20 ಪಿ.ಪಿ.ಎಮ್. 15 ದಿನಗಳಿಗೊಮ್ಮೆ 2 ಬಾರಿ ಕೊಡುವುದು<br>➢ ಮಾವು : ಜಿಗಿಹುಳು ಮತ್ತು ಬೂದಿರೋಗದ ನಿಯಂತ್ರಣಕ್ಕಾಗಿ ಗಿಡಗಳಿಗೆ 4ಗ್ರಾಂ ಕಾರ್ಬರಿಲ್ (50 wp) ಅಥವಾ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 200.ಎಸ್.ಎಲ್ ಅಥವಾ 0.5 ಮಿ.ಲೀ ಲ್ಯಾಂಬ್ಡಾ ಸೈಯೋಲೋಥ್ರಿನ್ (5 ಇಸಿ) ಜೊತೆಗೆ 3ಗ್ರಾಂ. ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) ಪ್ರತಿ ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಸಿಂಪಡಿಸಿ.<br>➢ ಜಿಗಿಹುಳುವಿನ ಹಾವಳಿ ತೀವ್ರವಾಗಿದ್ದಲ್ಲಿ ಅಝಾಡಿರೆಕ್ಟಿನ್ (10,000 ಪಿ.ಪಿ.ಎಮ್) 7 ಮಿ.ಲೀ/ಲೀ ನೀರಿನಲ್ಲಿ ಸಿಂಪಡಿಸಿ. |
| | ಹೈನುಗಾರಿಕೆ |

| | |
|---|---|
| **ಪಶುಸಂಗೋಪನೆ** | ➢ ಕಟಾವಾದ ಜೋಳವನ್ನು ಉಪಯೋಗಿಸಿಕೊಂಡು ರಸಮೇವನ್ನು ತಯಾರಿಸಿ ರಾಸುಗಳಿಗೆ ಪೌಷ್ಟಿಕವಾದಂತಹ ಮೇವನ್ನು ಒದಗಿಸಬಹುದು.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.)<br>➢ ಹೆಚ್ಚು ಪಶು ಆಹಾರ ತಿನ್ನಿಸುವ ಸಮಯದಲ್ಲಿ ಅದನ್ನು 3–4 ಸಮಭಾಗ ಮಾಡಿ ನಿತ್ಯ ನಾಲ್ಕು ಬಾರಿ ತಿನ್ನಿಸುವುದು ಉತ್ತಮ.<br>➢ ದ್ವಿದಳ ಧಾನ್ಯಗಳ ಬೆಳೆಗಳಲ್ಲಿ ಕರಗುವ ಶರ್ಕರ ಪದಾರ್ಥಗಳು ಕಡಿಮೆ ಇದ್ದು ತೇವಾಂಶ ಹೆಚ್ಚಿರುವುದರಿಂದ ಬೆಳೆಗಳನ್ನು ಸ್ವಲ್ಪ ಬಾಡಿಸಿ ಉಪಯೋಗಿಸಬೇಕು. ದ್ವಿದಳ ಧಾನ್ಯದ ಸೊಪ್ಪುಗಳನ್ನು ರಸ ಮೇವಿನಲ್ಲಿ ಶೇ.10 ರಿಂದ 15 ರಷ್ಟು ಮಾತ್ರ ಉಪಯೋಗಿಸಬೇಕು.<br>➢ ಬೆಳೆಯಲ್ಲಿ ಶೇ. 65–70 ರಷ್ಟು ತೇವಾಂಶ ಇರಬೇಕು. ತೇವಾಂಶ ಇದಕ್ಕಿಂತಲೂ ಕಡಿಮೆಯಾದರೆ ಹುದುಗುವಿಕೆ ವಿಫಲಗೊಂಡು ಕಳಪೆ ಗುಣಮಟ್ಟದ ಕಂದು ಬಣ್ಣದ ರಸಮೇವು ತಯಾರಾಗುತ್ತದೆ. ಇದೇ ರೀತಿ ಮೇವಿನಲ್ಲಿ ತೇವಾಂಶ ಶೇ.70 ಕ್ಕಿಂತಲೂ ಹೆಚ್ಚಿದ್ದರೆ ರಸಸಾರ ಹೆಚ್ಚಾಗಿ ಮೇವು ಹುಳಿಯಾಗಿ ಕೊಳೆತ ವಾಸನೆಯಿಂದ ಕೂಡಿರುತ್ತದೆ. |


**ನೋಡಲ್ ಅಧಿಕಾರಿ:**

ಕೃಷಿ ಹವಾಮಾನ ವಿಭಾಗ

**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**